## 12. ಕೋವಿಡ್, ನಾನ್ ಕೋವಿಡ್ ಪ್ರತ್ಯೇಕ ಆಸ್ಪತ್ರೆ

ಬಿಬಿಎಂಪಿ ಪೂರ್ವ ವಲಯದ ಪ್ರತಿಯೊಂದು ವಿಧಾನಸಭಾ ಕ್ಷೇತ್ರದಲ್ಲಿ ಕೋವಿಡ್ ಮತ್ತು ನಾನ್ ಕೋವಿಡ್ ಆಸ್ಪತ್ರೆಗಳನ್ನು ತೆರೆಯಬೇಕು. ಕೊರೋನಾ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಯಾವುದೇ ಕಾರ್ಯಕ್ರಮ ರೂಪಿಸುವ ಮುನ್ನ ಆಯಾ ಕ್ಷೇತ್ರಗಳ ಶಾಸಕರೊಂದಿಗೆ ಚರ್ಚಿಸಬೇಕು ಎಂದು ವಸತಿ ಸಚಿವ ವಿ.ಸೋಮಣ್ಣ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ನಗರದ ಮೇಯೋಹಾಲ್‌ನಲ್ಲಿನ ಜಂಟಿ ಆಯುಕ್ತರ ಕಚೇರಿಯಲ್ಲಿ ಪೂರ್ವ ವಲಯದ ಶಾಸಕರು, ಕಾರ್ಪೋರೇಟರ್‌ಗಳೊಂದಿಗೆ ಸಭೆ ನಡೆಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಖಾಸಗಿ ಆಸ್ಪತ್ರೆಗಳು ಚಿಕಿತ್ಸೆಗೆ ಬರುವ ಸಾರ್ವಜನಿಕರನ್ನು ಹಾಸಿಗೆಗಳು ಖಾಲಿ ಇಲ್ಲವೆಂಬ ಕಾರಣ ನೀಡಿ ವಾಪಸ್ಸು ಕಳುಹಿಸಬಾರದು. ರೋಗಿಗಳನ್ನು ಆಸ್ಪತ್ರೆಗಳಿಗೆ ವರ್ಗಾಯಿಸಲು ಮತ್ತು ಮೃತದೇಹಗಳನ್ನು ಆದಷ್ಟು ಶೀಘ್ರವಾಗಿ ಸಂಬಂಧಿಸಿದವರಿಗೆ ನೀಡಬೇಕು. ಬೂತ್ ಮಟ್ಟದಲ್ಲಿ ಕೊರೋನಾ ವಾರಿಯರ್ಸ್‌ಗಳನ್ನು ನಿಯೋಜಿಸಬೇಕು ಎಂದು ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.

ಶಾಸಕ ಕೆ.ಜೆ.ಜಾರ್ಜ್ ಮಾತನಾಡಿ "ಲಾಕ್‌ಡೌನ್ ವೇಳೆ ಅನ್ನಭಾಗ್ಯ ಯೋಜನೆಯಡಿ ಪ್ರತಿಯೊಬ್ಬರಿಗೆ ಅಕ್ಕಿ ವಿತರಿಸಬೇಕು. ಎಲ್ಲ ಆಸ್ಪತ್ರೆಗಳಲ್ಲಿ ಆಮ್ಲಜನಕದ ಕೊರತೆ ನಿವಾರಿಸಬೇಕು. ಪ್ರತಿಯೊಂದು ವಿಧಾನಸಭಾ ಕ್ಷೇತ್ರಕ್ಕೆ ಒಂದೊಂದು ಆಸ್ಪತ್ರೆಯನ್ನು ಸ್ಥಾಪಿಸುವ ಕೆಲಸ ತ್ವರಿತವಾಗಿ ಆಗಬೇಕು" ಎಂದು ಒತ್ತಾಯಿಸಿದರು.

ಶಾಸಕ ರಿಜ್ವಾನ್ ಹರ್ಷದ್, "ಶಿವಾಜಿನಗರದ ಆಸ್ಪತ್ರೆಯಲ್ಲಿ 30 ಐಸಿಯು, ವೆಂಟಿಲೇಟರ್ ವ್ಯವಸ್ಥೆ ಮಾಡಲಾಗಿದೆ. ಇಲ್ಲಿ ವೈದ್ಯರ ಕೊರತೆ ಇದ್ದು, ಆದಷ್ಟು ಶೀಘ್ರವಾಗಿ ನೇಮಕ ಮಾಡಬೇಕು" ಎಂದು ಆಗ್ರಹಿಸಿದರು. ಶಾಸಕ ಭೈರತಿ ಸುರೇಶ್ "ಹೆಬ್ಬಾಳ ಕ್ಷೇತ್ರದಲ್ಲಿ ರ‍್ಯಾಪಿಡ್ ಟೆಸ್ಟ್ ಕಿಟ್‌ಗಳನ್ನು ಒದಗಿಸಬೇಕು" ಎಂದು ಒತ್ತಾಯಿಸಿದರು.

ಶಾಸಕ ಎನ್.ಹ್ಯಾರಿಸ್, ವಿಧಾನ ಪರಿಷತ್ ಸದಸ್ಯರಾದ ರಮೇಶ್, ಗೋವಿಂದರಾಜು, ಪಾಲಿಕೆಯ ವಿಶೇಷ ಆಯುಕ್ತ ರವಿಕುಮಾರ್ ಸುರಪುರ, ಸಮಾಜ ಕಲ್ಯಾಣ ಇಲಾಖೆ ಆಯುಕ್ತ ರವಿಕುಮಾರ್, ಡಿಸಿಪಿ ಶರಣಪ್ಪ ಮತ್ತಿತರರು ಉಪಸ್ಥಿತರಿದ್ದರು.

**ವೈದ್ಯ ಕಾಲೇಜುಗಳಲ್ಲಿ 2250 ಹಾಸಿಗೆ ವ್ಯವಸ್ಥೆ:** ಯಶವಂತಪುರ ಹಾಗೂ ರಾಜರಾಜೇಶ್ವರಿ ನಗರ ವಲಯ ವ್ಯಾಪ್ತಿಯ ಹಲವು ವೈದ್ಯಕೀಯ ಕಾಲೇಜುಗಳಲ್ಲಿ ಕೊರೋನಾ ಸೋಂಕಿತರ ಚಿಕಿತ್ಸೆಗೆ 2250 ಹಾಸಿಗೆ ವ್ಯವಸ್ಥೆ ಮಾಡಲಾಗಿದೆ ಎಂದು ಸಹಕಾರಿ ಸಚಿವ ಎಸ್.ಟಿ.ಸೋಮಶೇಖರ್ ತಿಳಿಸಿದರು. ನಗರದ ಅಂಬೇಡ್ಕರ್ ಕಾಲೀಜಿನಲ್ಲಿ ನಡೆದ ರಾಜರಾಜೇಶ್ವರಿ ನಗರ ವಲಯದ ಲಗ್ಗೆರೆ ಉಪ ವಿಭಾಗ ವ್ಯಾಪ್ತಿಯ ಕಾರ್ಪೋರೇಟರ್‌ಗಳ ಸಭೆಯಲ್ಲಿ ಅವರು ಮಾತನಾಡಿ, "ಈಗಾಗಲೇ ಸಿದ್ಧಪಡಿಸಿರುವ ಈ ಹಾಸಿಗೆಗಳನ್ನು ಯಶವಂತಪುರ ಹಾಗೂ ರಾಜರಾಜೇಶ್ವರಿ ನಗರ ವಲಯದ ವ್ಯಾಪ್ತಿಗೆ ಮೀಸಲಿಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ, ಸಿಎಂ ಕೂಡ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ" ಎಂದು ಸಚಿವರು ತಿಳಿಸಿದರು.

"ಆಯಾ ಕಾರ್ಪೋರೇಟರ್‌ಗಳು, ಅಧಿಕಾರಿಗಳು, ಜೆಸಿಗಳು ಹಾಗೂ ಜನಪ್ರತಿನಿಧಿಗಳನ್ನು ಸಾಮಾನ್ಯ ಜನರು ಸಂಪರ್ಕಿಸಲು ಅವರ ಮೊಬೈಲ್ ಅಥವಾ ದೂರವಾಣಿ ಸಂಖ್ಯೆ ಇರುವ ಕರಪತ್ರಗಳನ್ನು ಮುದ್ರಿಸಿ ಹಂಚಬೇಕು. ಯಶವಂತಪುರ ಹಾಗೂ ರಾಜರಾಜೇಶ್ವರಿ ನಗರ ವ್ಯಾಪ್ತಿಯ ಎಂಜಿನೀಯರ್‌ಗಳನ್ನು ಇದೇ ವ್ಯಾಪ್ತಿಯ ಕಾರ್ಯಕ್ಕೆ ಬಳಸಿಕೊಳ್ಳಬೇಕು" ಎಂದು ಹೇಳಿದರು.

**ಮಹಾಲಕ್ಷ್ಮಿ ಲೇಔಟ್‌ನಲ್ಲಿ 250 ಬೆಡ್‌ಗಳ ಕೋವಿಡ್ ಸೆಂಟರ್:** ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದಲ್ಲಿ ಕೊರೋನಾ ಪಾಸಿಟಿವ್ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಎಲ್ಲಾ ಸೋಂಕಿತರಿಗೂ ಚಿಕಿತ್ಸೆ ನೀಡುವ ಸಲುವಾಗಿ 250 ಬೆಡ್‌ಗಳಿರುವ ಕೋವಿಡ್ ಸೆಂಟರ್ ತೆರೆಯಲಾಗಿದೆ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಗೋಪಾಲಯ್ಯ ಹೇಳಿದರು.

ನಗರದ ಮಹಾಲಕ್ಷ್ಮಿ ಲೇಔಟ್‌ನ ಖಾಸಗಿ ಆಸ್ಪತ್ರೆಗಳ ಸಹಯೋಗದಲ್ಲಿ ಪ್ರಿಸ್ಟೀನ್ ಆಸ್ಪತ್ರೆಯಲ್ಲಿ ಆಯೋಜಿಸಿದ್ದ 250 ಬೆಡ್‌ಗಳ ಕೋವಿಡ್-19 ಕೇರ್ ಸೆಂಟರ್ ಹಾಗೂ ರಾಸಾಯನಿಕ ಸಿಂಪಡಣೆ ವಾಹನಗಳಿಗೆ

ಅವರು ಚಾಲನೆ ನೀಡಿ ಮಾತನಾಡಿದರು. ಇದೇ ವೇಳೆ ಮಾತನಾಡಿದ ಪ್ರಾಥಮಿಕ ಶಿಕ್ಷಣ ಸಚಿವ ಎಸ್.ಸುರೇಶ್ ಕುಮಾರ್ "ಕೊರೋನಾ ಸೋಂಕಿನ ಲಕ್ಷಣಗಳ ಸರಪಳಿಯನ್ನು ಮುರಿಯುವ ಸಲುವಾಗಿ ಸರ್ಕಾರ ಏಳು ದಿನಗಳ ಕಾಲ ಲಾಕ್‌ಡೌನ್ ಘೋಷಣೆ ಮಾಡಿದೆ. ಈ ಸಂದರ್ಭದಲ್ಲಿ ಸರ್ಕಾರಕ್ಕೆ ಸಹಕಾರ ನೀಡಬೇಕು" ಎಂದರು.

ಕಾರ್ಯಕ್ರಮದಲ್ಲಿ ಪ್ರಿಸ್ಟೀನ್ ಆಸ್ಪತ್ರೆಯ ಮುಖ್ಯಸ್ಥ ಹಾಗೂ ಮುಖ್ಯ ವೈದ್ಯ ಊ.ಒ.ಪ್ರಸನ್ನ ಮಾತನಾಡಿದರು. ಮಾಜಿ ಶಾಸಕ ನೆ.ಲ.ನರೇಂದ್ರ ಬಾಬು, ಬಿಬಿಎಂಪಿ ಮಾಜಿ ಉಪ ಮಹಾಪೌರ ಎಸ್.ಹರೀಶ್. ಬಿಬಿಎಂಪಿ ಸದಸ್ಯ ಕೆ.ವಿ.ರಾಜೇಂದ್ರ ಕುಮಾರ್, ಎಂ.ಮಹದೇವ್ ಮತ್ತಿತರರು ಉಪಸ್ಥಿತರಿದ್ದರು.

ಆಧಾರ:ವಿಜಯವಾಣಿ, ದಿನಾಂಕ:14.07.2020